4. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಡಿ.ಬಿ. ಚಂದ್ರೇಗೌಡ: (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) ಮಾನ್ಯ ಅಧ್ಯಕ್ಷರೆ, ಸಣ್ಣ ಕೈಗಾರಿಕಾ ಮತ್ತು ಹಜ್ ಸಚಿವರ ಪರವಾಗಿ,

1956 ಕಂಪೆನಿ ಕಾಯ್ದೆ ಅಧಿನಿಯಮ 619(ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ 1999-2000ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ ಮತ್ತು 2000-2001ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

2. ನಗರಾಭಿವೃದ್ಧಿ ಸಚಿವರ ಪರವಾಗಿ

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರರ ಅಧಿನಿಯಮ 48(5) ಮತ್ತು 49ನೇ ಪ್ರಕರಣದ ಮೇರೆಗೆ

1. ಶಿವಮೊಗ್ಗ ನಗರಾಭಿವೃದ್ಧಿ ಪ್ರಾಧಿಕಾರದ 2000-2001ನೇ ಸಾಲಿನ ವಾರ್ಷಿಕ ವರದಿ

2. ಹಾಸನ ನಗರಾಭಿವೃದ್ಧಿ ಪ್ರಾಧಿಕಾರದ 2001-2002ನೇ ಸಾಲಿನ ವಾರ್ಷಿಕ ವರದಿ

3. ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ 2001-2002ನೇ ಸಾಲಿನ ವಾರ್ಷಿಕ ವರದಿ

4. ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ 2000-200ನೇ ಸಾಲಿನ ಲೆಕ್ಕಪರಿಶೋಧನಾ ವರದಿ

5. ಬಳ್ಳಾರಿ ನಗರಾಭಿವೃದ್ಧಿ ಪ್ರಾಧಾಕರದ 2000-2001ನೇ ಸಾಲಿನ ಲೆಕ್ಕ ತನಿಖಾ ವರದಿಯನ್ನು ಮಂಡಿಸುತ್ತೇನೆ.

3. ಶ್ರೀ ಬಿ. ರಮಾನಾಥ ರೈ (ಸಾರಿಗೆ ಸಚಿವರು) ಮಾನ್ಯ ಅಧ್ಯಕ್ಷರೆ,

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಕಾಯ್ದೆ 1950ರ 35(2)ರ ಮೇರೆಗೆ

2000-2001ನೇ ಸಾಲಿನ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಾರ್ಷಿಕ ಆಡಳಿತ ವರದಿಯನ್ನು ಮಂಡಿಸುತ್ತೇನೆ.

4. ಡಾ: ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ,

1976ರ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 45(2) 47(4)ನೇ ಪ್ರಕರಣದ ಮೇರೆಗೆ

ಮೈಸೂರು ವಿಶ್ವವಿದ್ಯಾನಿಲಯದ 84ನೇ ವಾರ್ಷಿಕ ವರದಿ 1999-2000 ಕುವೆಂಪು ವಿಶ್ವವಿದ್ಯಾನಿಲಯದ 2000-2001ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಡಿ.ಬಿ. ಚಂದ್ರೇಗೌಡ: (ಕಾನೂನು, ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ಪ್ರವಾಸೋದ್ಯಮ ಹಾಗೂ ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರ ಪರವಾಗಿ;

5. 1956ರ ಕಂಪೆನಿ ಕಾಯ್ದೆ ಅಧಿನಿಯಮ 619 (ಎ) ಪ್ರಕರಣದ ಮೇರೆಗೆ

ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ಸಂಸ್ಥೆ ಬೆಂಗಳೂರು 21ನೇ ವಾರ್ಷಿಕ ವರದಿ 2000-2001ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಸಿ. ಬೈರೇಗೌಡ: ಮಾನ್ಯ ಅಧ್ಯಕ್ಷರೆ, ಡಿ.ಕೆ. ಶಿವಕುಮಾರ್‌ರವರ ಹೆಸರಿನ ಮುಂದಿರತಕ್ಕ ಕಾಗದಪತ್ರಗಳನ್ನು ಮಾನ್ಯ ಹೆಚ್.ಕೆ. ಪಾಟೀಲ್‌ರವರು ಮಂಡಿಸಿದ್ದರೆ ಬಹಳ ಚೆನ್ನಾಗಿರುತ್ತಿತ್ತು.

ಅಧ್ಯಕ್ಷರು: ಯಾವುದು ಯಾವುದಕ್ಕೋ ಹೋಲಿಸಬೇಡಿ.

ಶ್ರೀ ಎಸ್. ಸುರೇಶ್ ಕುಮಾರ್: ಈಗ 48 ಜನ ಮಂತ್ರಿಗಳಿದ್ದಾರೆ. Create one more port folio inst to reads these things. ಯಾರ್ಯಾರು ಮಂತ್ರಿಗಳು ಬಂದಿಲ್ಲ ಅವರ ಹೆಸರನ್ನು ಓದಲು ಪವರ್ ಆಫ್ ಅಟಾರ್ನಿ ಅದಕ್ಕೋಸ್ಕರ ಒಂದು ಮಿನಿಸ್ಟರ್ ಕ್ರಿಯೇಟ್ ಮಾಡಿ

Sri. D.B. Chandregowda: He has no authority to constitute a Ministry. ತಮ್ಮ ಸಲಹೆಯನ್ನು ಮಾನ್ಯ ಮುಖ್ಯಮಂತ್ರಿಗಳಿಗೆ ಹೇಳಿ. ಅದನ್ನು ಬಿಟ್ಟು ಪಾಪ ಮಾನ್ಯ ಸಭಾಧ್ಯಕ್ಷರಿಗೆ ಹೇಳಿದರೆ ಹೇಗೆ?

ಶ್ರೀ ಡಿ.ಬಿ. ಚಂದ್ರೇಗೌಡ: (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) ಮಾನ್ಯ ಅಧ್ಯಕ್ಷರೆ ಇಂಧನ ರಾಜ್ಯ ಸಚಿವರ ಪರವಾಗಿ:

6. 1956ರ ಕಂಪೆನಿ ಕಾಯಿದೆ ಅದಿನಿಯಮ 619(ಎ)ರ ಪ್ರಕರಣದ ಮೇರೆಗೆ

ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ 2000-2001ನೇ ಸಾಲಿನ ವಾರ್ಷಿಕ ವರದಿ ವಿಶ್ವೇಶ್ವರಯ್ಯ ವಿದ್ಯುತ್ ನಿಗಮ ನಿಯಮಿತದ 2000-2001ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿ.

1999ರ ಕರ್ನಾಟಕ ವಿದ್ಯುಚ್ಛಕ್ತಿ ಅಧಿನಿಯಮದ ಅನುಸೂಚಿ ಭಾಗ 1ರ ಕಂಡಿಕೆ 5ರ ಮೇರೆಗೆ

ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ 2000-2001ನೇ ಸಾಲಿನ ಲೆಕ್ಕಪತ್ರ ಹಾಗೂ 2ನೇ ವಾರ್ಷಿಕ ವರದಿ (2000-2001)ಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ಸಭೆಯ ಮುಂದಿಡಲಾಗುವ ಕಾಗದಪತ್ರಗಳನ್ನು ಮಂಡಿಸಲಾಯಿತು.